ಕರ್ನಾಟಕ ಸರ್ಕಾರ
ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿ.ಟಿ.ಇ 01 ಇಎಪಿ 2024

ಆಯುಕ್ತರವರ ಕಛೇರಿ.
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದಿನಾಂಕ:23.04.2025

**ಸುತ್ತೋಲೆ**

| | |
|---|---|
| ವಿಷಯ: | ಸಿ-03, ಸಿ-09, ಮತ್ತು ಸಿ-15 ಪಠ್ಯಕ್ರಮದಲ್ಲಿ ಪ್ರಥಮ/ಲ್ಯಾಟರಲ್ ಎಂಟ್ರಿ ಮುಖಾಂತರ ತೃತೀಯ ಸೆಮಿಸ್ಟರ್ ಗೆ ಪ್ರವೇಶ ಪಡೆದು 09/06 ವರ್ಷಗಳ ಕಾಲಾವಧಿ ಮೀರಿರುವ ವಿದ್ಯಾರ್ಥಿಗಳಿಗೆ ಏಪ್ರಿಲ್/ಮೇ-2025 ರ ಪರೀಕ್ಷೆಗೆ ಹಾಜರಾಗಲು ಅನುಮತಿ ನೀಡುವ ಬಗ್ಗೆ. |
| ಉಲ್ಲೇಖ: | ಏಕ ಕಡತ ಸಂಖ್ಯೆ:DTE-EXAM0EPS/15/2024 |

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖದನ್ವಯ ಸಿ-03, ಸಿ-09, ಮತ್ತು ಸಿ-15 ಪಠ್ಯಕ್ರಮದಲ್ಲಿ ಪ್ರಥಮ/ಲ್ಯಾಟರಲ್ ಎಂಟ್ರಿ ಮುಖಾಂತರ ತೃತೀಯ ಸೆಮಿಸ್ಟರ್ ಗೆ ಪ್ರವೇಶ ಪಡೆದು **09/06** ವರ್ಷಗಳ ಕಾಲಾವಧಿ ಮೀರಿರುವ ಎಲ್ಲಾ ವಿದ್ಯಾರ್ಥಿಗಳಿಗೆ ಏಪ್ರಿಲ್/ಮೇ-2025 ರ ಪರೀಕ್ಷೆಗೆ ಹಾಜರಾಗಲು ಸರ್ಕಾರವು ಅನುಮತಿ ನೀಡಿ ಆದೇಶಿಸಿದೆ.

ಸರ್ಕಾರದ ಅನುಮತಿ ಹಿನ್ನೆಲೆಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯಿಸುವಂತೆ ದಂಡರಹಿತವಾಗಿ ನಿಗದಿತ ಪರೀಕ್ಷಾ ಶುಲ್ಕ ಪಾವತಿಸಿ ಏಪ್ರಿಲ್/ಮೇ-2025 ರ ಪರೀಕ್ಷೆಗೆ ನೋಂದಾಯಿಸಿಕೊಳ್ಳಲು ದಿನಾಂಕ:**26.04.2025** ರವರೆಗೆ ಕಾಲಾವಕಾಶ ನೀಡಲಾಗಿದೆ. ನಂತರ ಯಾವುದೇ ಕಾರಣಕ್ಕೂ ಪರೀಕ್ಷೆ ಶುಲ್ಕ ಪಾವತಿಸಲು ದಿನಾಂಕ ವಿಸ್ತರಿಸಲಾಗುವುದಿಲ್ಲವೆಂದು ಸ್ಪಷ್ಟಪಡಿಸಲಾಗಿದೆ. **ಪರೀಕ್ಷೆ ಬರೆಯಲು ನೋಂದಾಯಿಸಿಕೊಳ್ಳುವ ಅರ್ಹ ವಿದ್ಯಾರ್ಥಿಗಳ ಪಟ್ಟಿಯನ್ನು ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ Update ಮಾಡಿ ಹತ್ತಿರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯನ್ನು ಪರೀಕ್ಷಾ ಕೇಂದ್ರವಾಗಿ ಆಯ್ಕೆ ಮಾಡಿಕೊಂಡು, ನಂತರ ಪ್ರವೇಶ ಪತ್ರಗಳನ್ನು ಮುದ್ರಿಸಿ ವಿದ್ಯಾರ್ಥಿಗಳಿಗೆ ವಿತರಿಸಲು ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಪ್ರಾಂಶುಪಾಲರುಗಳಿಗೆ ಸೂಚಿಸಲಾಗಿದೆ.**

ಮುಂದುವರೆದು, ಈ ವಿಷಯವನ್ನು ಮಾಧ್ಯಮಗಳ ಮೂಲಕ ಪ್ರಚುರಪಡಿಸಲು ಮತ್ತು ಪೋಷಕರು ಹಾಗೂ ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರಲು ತಿಳಿಸಲಾಗಿದೆ.

**ವಿ.ಸೂ:** ಸಿ-03, ಸಿ-09, ಮತ್ತು ಸಿ-15 ಪಠ್ಯಕ್ರಮಗಳ ಥಿಯರಿ ವಿಷಯಗಳ ವೇಳಾಪಟ್ಟಿಯು ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಲಭ್ಯವಿರುತ್ತದೆ ಎಂದು ತಿಳಿಸಲಾಗಿದೆ.

ಕಾರ್ಯದರ್ಶಿ
ತಾಂತ್ರಿಕ ಪರೀಕ್ಷಾ ಮಂಡಳಿ

ಇವರಿಗೆ,

1) ರಾಜ್ಯದ ಎಲ್ಲಾ ಸರ್ಕಾರಿ/ಖಾಸಗಿ ಅನುದಾನಿತ/ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಚಾರ್ಯರುಗಳು- ಮಾಹಿತಿಗಾಗಿ ಹಾಗೂ ಸೂಚನಾ ಫಲಕದಲ್ಲಿ ಪ್ರಕಟಿಸುವ ಸಲುವಾಗಿ
2) ಶ್ರೀ ಹರೀಶ ಶೆಟ್ಟಿ, ಪ್ರಿನ್ಸಿಪಾಲರು, ಕರ್ನಾಟಕ (ಸರ್ಕಾರಿ) ಪಾಲಿಟೆಕ್ನಿಕ್, ಮಂಗಳೂರು –ಅಗತ್ಯ ಕ್ರಮಕ್ಕಾಗಿ

**ಪ್ರತಿ:**

1. ಆಯುಕ್ತರ ಆಪ್ತ ಶಾಖೆ - ಅವಗಾಹನೆಗಾಗಿ.
2. ನಿರ್ದೇಶಕರ ಆಪ್ತ ಶಾಖೆ- ಅವಗಾಹನೆಗಾಗಿ.
3. ಇ-ಗವರ್ನೆನ್ಸ್ ವಿಭಾಗಕ್ಕೆ (ವೆಬ್ ಸೈಟ್‌ನಲ್ಲಿ ಪ್ರಕಟಿಸಲು)
4. ಇಸಿಎಸ್/ಇಎಫ್‌ಎಸ್/ಇಆರ್‌ಎಸ್, ಮುಂದಿನ ಕ್ರಮಕ್ಕಾಗಿ.
5. ರಿಜಿಸ್ಟ್ರಾರ್ (ಪರೀಕ್ಷೆ)
6. ಕಾರ್ಯದರ್ಶಿಯವರ ಆಪ್ತ ಶಾಖೆ
7. ಉಪ ನಿರ್ದೇಶಕರು (ಪರೀಕ್ಷೆ)
8. ಗಣಕ ಕೇಂದ್ರ ಬಿಟಿಇ ಲಿಂಕ್ಸ್ ವೆಬ್ ಪೋರ್ಟಲ್ ನಲ್ಲಿ ಪ್ರಕಟಿಸಲು.